ಈ) ಬಾಕಿ ಅನುದಾನ ಬಿಡುಗಡೆಗೆ ಸರಕಾರ ಕೈಗೊಂಡ ಕ್ರಮಗಳೇನು?

**ಶ್ರೀ ಎ. ನಾರಾಯಣಸ್ವಾಮಿ (ಸಮಾಜ ಕಲ್ಯಾಣ ಸಚಿವರು):**

ಅ) ಅಂತಹ ಕಾಮಗಾರಿಗಳ ಸಂಖ್ಯೆ 23.

ಆ) 17 ಕಾಮಗಾರಿಗಳಿಗೆ ರೂ.100.00 ಲಕ್ಷಗಳು ಬಿಡುಗಡೆ ಮಾಡಲಾಗಿದೆ.

ಇ)

| ಕ್ರ. ಸಂ. | ತಾಲ್ಲೂಕು | ಕಾಮಗಾರಿಗಳ ಸಂಖ್ಯೆ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|
| 1 | ಸಿಂಧಗಿ | 01 | 10.00 |
| 2 | ಇಂಡಿ | 02 | 20.00 |
| 3 | ಮುದ್ದೇಬಿಹಾಳ್ | 01 | 10.00 |
| 4 | ಬಸವನ ಬಾಗೇವಾಡಿ | 01 | 10.00 |
| 5 | ಬುಜಾಪುರ | 01 | 10.00 |
| | ಒಟ್ಟು | 06 | 60.00 |

ಈ) ಜಿಲ್ಲಾಧಿಕಾರಿಯವರಿಂದ ಪ್ರಸ್ತಾವನೆ ಸ್ವೀಕರಿಸಿದ ನಂತರ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

**ವಿಜಾಪುರ ಜಿಲ್ಲೆಯಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪ್ರಾರಂಭ**

**169 (360) ಶ್ರೀ ಎಂ. ಬಿ. ಪಾಟೀಲ್ (ಬಬಲೇಶ್ವರ):** ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 2009–10, 2010–11ನೇ ಸಾಲಿನಲ್ಲಿ ವಿಜಾಪುರ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹಾಗೂ ಅವುಗಳಲ್ಲಿ ಹೊಸದಾಗಿ ಪ್ರಾರಂಭಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು;

ಆ) ಹೊಸದಾಗಿ ಪ್ರಾರಂಭಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವೈದ್ಯಾಧಿಕಾರಿಗಳ ಹಾಗೂ ಇತರೆ ಹುದ್ದೆಗಳು

ಮಂಜೂರಾಗಿವೆಯೇ? ಮಂಜೂರಾತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

ಇ) ವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು? ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು);

**ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):**

ಅ) ವಿಜಾಪುರ ಜಿಲ್ಲೆಯಲ್ಲಿ ಒಟ್ಟು 53 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಅವುಗಳ ಪೈಕಿ, 5 ಹೊಸದಾಗಿ ಪ್ರಾರಂಭಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರಿವೆ. 2010–11ನೇ ಸಾಲಿನಲ್ಲಿ 2 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಮಂಜೂರಾತಿಯನ್ನು ನೀಡಲಾಗಿದೆ.

ಆ) ಹೊಸದಾಗಿ ಪ್ರಾರಂಭಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅವಶ್ಯವಿರುವ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

ಇ) ವಿಜಾಪುರ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಅಲಸಂಗಿ ಹೊರತುಪಡಿಸಿ ಉಳಿದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳ ಹುದ್ದೆಗಳು ಭರ್ತಿಯಾಗಿರುತ್ತವೆ.

**ಹೊಸದಾಗಿ ಸಮುದಾಯ ಆರೋಗ್ಯ ಕೇಂದ್ರಗಳನ್ನು ಪ್ರಾಂಭಿಸಿರುವ ತಜ್ಞ ವೈದ್ಯರ ನೇಮಕ**

170 (361): **ಶ್ರೀ ಎಂ. ಬಿ. ಪಾಟೀಲ್ (ಬಬಲೇಶ್ವರ):** ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) 2010–11ನೇ ಸಾಲಿನಲ್ಲಿ ವಿಜಾಪುರ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭಿಸಲಾದ ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು;

ಆ) ಸದರಿ ಸಮುದಾಯ ಆರೋಗ್ಯ ಕೇಂದ್ರಗಳಿಗೆ ನೇಮಕ ಮಾಡಿರುವ ತಜ್ಞ ವೈದ್ಯರ ಸಂಖ್ಯೆ ಎಷ್ಟು (ಸಮುದಾಯ ಕೇಂದ್ರಗಳ ಹೆಸರು ಹಾಗೂ ತಜ್ಞ ವೈದ್ಯರ ವಿವರವಾದ ಮಾಹಿತಿ ನೀಡುವುದು);